ರಾಜ್ಯದಲ್ಲಿ ಪ್ರೌಢಶಾಲಾ ಶಿಕ್ಷಕರ ಕೊರತೆಯ ನಿವಾರಣೆ

೧೧೦೪. ಶ್ರೀ ಆರ್.ಎನ್. ನಾಯ್ಕ (ಭಟ್ಕಳ).— ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.—

ಅ) ರಾಜ್ಯದಲ್ಲಿ ಪ್ರೌಢಶಾಲಾ ಶಿಕ್ಷಕರ ಕೊರತೆ ಎಷ್ಟಿದೆ?

ಆ) ಉತ್ತರ ಕನ್ನಡ ಜಿಲ್ಲೆಯಲ್ಲಿರುವ ಶಿಕ್ಷಕರ ಕೊರತೆಯೆಷ್ಟು;

ಇ) ಈಗಿರುವ ಪರಿಸ್ಥಿತಿಯಲ್ಲಿ ತಲಾ ಒಬ್ಬ ಶಿಕ್ಷಕರು ಎಷ್ಟು ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡಬಹುದು?

ಶ್ರೀ ಕೆ.ಹೆಚ್. ರಂಗನಾಥ್ (ಶಿಕ್ಷಣ ಮಂತ್ರಿಗಳು).—

ಅ) ೪೩೭

ಆ) ೯೨

ಇ) ೫೦ರಿಂದ ೭೫

ಮುಲ್ಕಿಯ ಗಾಂಧಿ ಮೈದಾನವನ್ನು ಸಾರ್ವಜನಿಕ ನಿರ್ಮಾಣಕ್ಕೆ ನೀಡಲು ಮನವಿ

೧೦೬೬. ಶ್ರೀ ಕೆ. ಸೋಮಪ್ಪ ಸಂಪರ್ಣ (ಮೂಡಬಿದರೆ).— ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ.—

ಅ) ಮುಲ್ಕಿಯಲ್ಲಿರುವ ಗಾಂಧಿ ಮೈದಾನವನ್ನು ಸಾರ್ವಜನಿಕ ನಿರ್ಮಾಣಕ್ಕೆ ಕೊಡ ಬಾರದೆಂದು ಸಾರ್ವಜನಿಕರಿಂದ ಮನವಿಗಳೇನಾದರೂ ಬಂದಿದೆಯೇ;

ಆ) ಸಾರ್ವಜನಿಕ ಉಪಯೋಗಕ್ಕಾಗಿ ಮೈದಾನ ಬಿಟ್ಟುಕೊಡಲು ಪಂಚಲ್ಕಿ ಪುರಸಭೆಯವರು ಕೇಳಿಕೊಂಡಿದ್ದು ಸರ್ಕಾರಕ್ಕೆ ತಿಳಿದಿದೆಯೇ?

ಇ) ಇದನ್ನು ಕ್ರೀಡಾಂಗಣವನ್ನಾಗಿ ಅಭಿವೃದ್ಧಿ ಪಡಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ?

ಶ್ರೀ ಕೆ. ಎಚ್. ರಂಗನಾಥ್ (ಶಿಕ್ಷಣ ಯುವಜನ ಸೇವಾ ಮತ್ತು ಕ್ರೀಡಾ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು).—

ಅ) ಇಲ್ಲ.

ಆ) ಇಲ್ಲ.

ಇ) ಈಗಾಗಲೇ ಜಿಲ್ಲಾ ಯುವಜನ ಸೇವಾ ಮತ್ತು ಕ್ರೀಡಾಧಿಕಾರಿಗಳು ದಕ್ಷಿಣ ಕನ್ನಡ ಜಿಲ್ಲೆ ಇವರಿಂದ ಈ ಬಗ್ಗೆ ವರದಿ ಸಲ್ಲಿಸಲು ಕೇಳಲಾಗಿದೆ.

ಕೇಂದ್ರದ ತೆಂಗು ಮಂಡಳಿಯು ಸಂಶೋಧನಾ ಕೇಂದ್ರ

೯೮೫. ಶ್ರೀ ಎಲ್. ಆರ್. ಶಿವರಾಮೇಗೌಡ (ನಾಗಮಂಗಲ).— ಮಾನ್ಯ ಕೃಷಿ ಮತ್ತು ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರಾ?

ಅ) ರಾಜ್ಯದಲ್ಲಿ ತೋಟಗಾರಿಕೆ ಇಲಾಖೆಯು ಕೇಂದ್ರಿಯ ತೆಂಗು ಮಂಡಳಿಯು ಸಂಶೋಧನಾ ಕೇಂದ್ರವನ್ನು ಸ್ಥಾಪಿಸಲು ಭಾರತ ಸರ್ಕಾರಕ್ಕೆ ನೀಡಿರುವ ಮೂಲಭೂತ ಸೌಲಭ್ಯಗಳೇನು?

ಆ) ಕೇಂದ್ರ ತೆಂಗು ಮಂಡಳಿಯಿಂದ ರಾಜ್ಯದ ಎಷ್ಟು ರೈತರಿಗೆ ಸಬ್ಸಿಡಿಯನ್ನು ತೋಟಗಾರಿಕೆ ಇಲಾಖೆಯ ಆಶ್ರಯದಲ್ಲಿ ೩೧-೩-೧೯೯೦ರವರೆಗೆ ನೀಡಲಾಗಿದೆ?

ಶ್ರೀ ಎಸ್. ಬಂಗಾರಪ್ಪ (ಕೃಷಿ ಮತ್ತು ತೋಟಗಾರಿಕೆ ಸಚಿವರು.)—

ಅ) ಕರ್ನಾಟಕ ಸರ್ಕಾರವು ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕಿನ ರಾಯಸಮುದ್ರ ಗ್ರಾಮದ ಅಮೃತ ಮಹಲ್ ಕಾವಲಿನಲ್ಲಿ ೩೦೦ ಎಕರೆ ಜಮೀನನ್ನು ಕೇಂದ್ರ ತೆಂಗು ಅಭಿವೃದ್ಧಿ ಮಂಡಳಿಗೆ ನೀಡಿದೆ.

ಆ) ೩೧-೩-೧೯೯೦ರವರೆಗೆ ಕೇಂದ್ರ ತೆಂಗು ಅಭಿವೃದ್ಧಿ ಮಂಡಳಿಯು ರಾಜ್ಯದ ೧೫,೭೨೮ ರೈತರಿಗೆ ರೂ. ೧೭೫.೦೦ ಲಕ್ಷ ರೂಪಾಯಿಗಳ ಸಹಾಯ ಧನವನ್ನು ನೀಡಿದೆ.